ಶ್ರೀ ಜೀವಿಜಯ. ಬಿ.ಎ. (ಸೋಮವಾರಪೇಟೆ):–

1048(1104) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ವಿಷಯಗಳನ್ನು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲೂಕಿನ ಕೂಡಿಗೆಯಲ್ಲಿ ಸೈನಿಕ ಶಾಲೆಯನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು.

(ಆ) ಸೈನಿಕ ಶಾಲೆ ಪ್ರಾರಂಭಿಸಲು ಸರ್ಕಾರದಿಂದ ಎಷ್ಟು ಹಣ ಮಂಜೂರಾಗಿದೆ.

ಶ್ರೀ ಬಸವರಾಜ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

(ಅ) ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲೂಕಿನ ಕೂಡಿಗೆಯಲ್ಲಿ ಹೊಸದಾಗಿ ಸೈನಿಕಶಾಲೆಯನ್ನು ಸಧ್ಯದಲ್ಲಿಯೇ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

(ಆ) ಸೈನಿಕ ಶಾಲೆ ಪ್ರಾರಂಭಿಸುವ ಬಗ್ಗೆ ಮೊದಲನೇ ಹಂತದಲ್ಲಿ ಅಂದಾಜು ರೂ.5.30 ಕೋಟಿಯನ್ನು 2007–08ನೇ ಸಾಲಿನ ಪೂರಕ ಅಂದಾಜಿನಲ್ಲಿ ಬಿಡುಗಡೆಗೆ ಕ್ರಮ ವಹಿಸಲಾಗುತ್ತಿದೆ.

ಶ್ರೀ ಜೀವಿಜಯ. ಬಿ.ಎ. (ಸೋಮವಾರಪೇಟೆ):–

1049(1106) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ವಿಷಯಗಳನ್ನು ತಿಳಿಸುವರೆ:–

(ಅ) ಹಾರಂಗಿ ಜಲಾಶಯದಲ್ಲಿ ಉದ್ಯಾನವನ ನಿರ್ಮಾಣ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಈ ಉದ್ಯಾನವನ ನಿರ್ಮಾಣ ಮಾಡಲು ಕಾವೇರಿ ನೀರಾವರಿ ನಿಗಮದಿಂದ ಯೋಜನೆಯನ್ನು ಹಾಕಿಕೊಳ್ಳಲಾಗಿದೆಯೇ?

ಶ್ರೀ ಕೆ.ಎಸ್. ಈಶ್ವರಪ್ಪ (ಜಲಸಂಪನ್ಮೂಲ ಸಚಿವರು):–

(ಅ) ಹಾರಂಗಿ ನೀರಾವರಿ ಯೋಜನೆಯ ಅಣೆಕಟ್ಟೆಯ ಸುತ್ತಮುತ್ತಲ ಖಾಲಿ ಇರುವ ಪ್ರದೇಶವನ್ನು ಅಭಿವೃದ್ಧಿಪಡಿಸಿ ಪ್ರವಾಸೋದ್ಯಮ ಚಟುವಟಿಕೆಯನ್ನು ಉತ್ತೇಜಿಸುವ ಸಲುವಾಗಿ (ಉದ್ಯಾನವನ ನಿರ್ಮಾಣವೂ ಸೇರಿದಂತೆ) BOT ಆಧಾರದ ಮೇಲೆ ಖಾಸಗಿ ಸಹಭಾಗಿತ್ವದೊಡನೆ ಕಾರ್ಯಕ್ರಮ ಹಮ್ಮಿಕೊಳ್ಳು ಕಾವೇರಿ ನೀರಾವರಿ ನಿಗಮದ ವತಿಯಿಂದ ಟೆಂಡರ್ ಆಹ್ವಾನಿಸಲಾಗಿದ್ದು, ಇದಕ್ಕಾಗಿ ಟೆಂಡರ್